ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 30–11–2020

# ಪತ್ರಿಕಾ ಪ್ರಕಟಣೆ

## ಶೀಘ್ರವೇ ನೂತರ ಶಿಕ್ಷಣ ನೀತಿ: ಸಿಎಂ ಬಿ.ಎಸ್.ಯಡಿಯೂರಪ್ಪ

**ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ):**
ಬೆಂಗಳೂರು: ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನೂತನ ಶಿಕ್ಷಣ ನೀತಿಯನ್ನು ಮಂಡಿಸಿ ಅನುಮೋದನೆ ಪಡೆಯಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ.

ಸೋಮವಾರ ಗೃಹ ಕಚೇರಿ ಕೃಷ್ಣಾದಲ್ಲಿ ರಾಜ್ಯಕ್ಕೆ ಸಂಬಂಧಿಸಿದಂತೆ ನೂತನ ಶಿಕ್ಷಣ ನೀತಿ ರೂಪಿಸಲು ರಚಿಸಿದ್ದ ಕಾರ್ಯಪಡೆ ಸಲ್ಲಿಸಿದ ಪೂರ್ಣ ವರದಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಾರ್ಯಪಡೆ ಸದಸ್ಯರು ಮತ್ತು ರಾಜ್ಯದ ಉನ್ನತ ಶಿಕ್ಷಣ, ಪ್ರಾಥಮಿಕ, ಪ್ರೌಢಶಿಕ್ಷಣ ಸಚಿವರು ಸೇರಿದಂತೆ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಕಾರ್ಯಪಡೆ ವರದಿ ಮುಖ್ಯಾಂಶಗಳನ್ನು ಆಲಿಸಿ ನೂತನ ಶಿಕ್ಷಣ ನೀತಿ ಜಾರಿಯ ರೂಪುರೇಷೆಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ನೀತಿ ಜಾರಿಗೆ ಅನುವಾಗುವಂತೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗುವುದು ಎಂದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಮಾತನಾಡಿ, ಡಾ. ಕೆ. ಕಸ್ತೂರಿ ರಂಗನ್ ನೇತೃತ್ವದ ಸಮಿತಿ ರಚಿಸಿದ ನೂತನ ಶಿಕ್ಷಣ ನೀತಿಯಲ್ಲಿ ಕರ್ನಾಟಕ ಛಾಪು ವಿಶಾಲವಾಗಿ ಪ್ರತಿಬಿಂಬಿತವಾಗಿದೆ. ಕೇಂದ್ರ ಸರ್ಕಾರ ಈ ನೀತಿ ಕುರಿತಂತೆ ರಾಜ್ಯಗಳೊಂದಿಗೆ ಸಂಪರ್ಕದಲ್ಲಿದ್ದು, ಜಾರಿ ಕುರಿತಂತೆ ಮೇಲುಸ್ತುವಾರಿ ನಡೆಸುತ್ತಿದೆ ಎಂದರು.

ಈ ನೀತಿ ಅನುಷ್ಠಾನಗೊಳಿಸುವ ಮೂಲಕ ರಾಜ್ಯದಲ್ಲಿ ಶಿಕ್ಷಣ ವ್ಯವಸ್ಥೆ ಒಂದು ಹೊಸ ರೂಪ ಪಡೆದುಕೊಳ್ಳಲಿದ್ದು, ನಾಡಿನ ಎಲ್ಲ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದುಕೊಳ್ಳಲಿದ್ದಾರೆ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನೂತನ ಶಿಕ್ಷಣ ನೀತಿ ಕುರಿತಂತೆ ಚರ್ಚಿಸಿ ಅನುಮೋದನೆ ಪಡೆಯಲಾಗುವುದು. ಹಾಗೆಯೇ ಮುಂದಿನ ವಿಧಾನಮಂಡಲ ಅಧಿವೇಶನದಲ್ಲಿ ಹೊಸ ಶಿಕ್ಷಣ ನೀತಿಯ ರೂಪುರೇಷೆಗಳ ಕುರಿತು ಚರ್ಚಿಸಿ ಇದರ ಜಾರಿಗೆ ಶಾಸನಾತ್ಮಕ ಕ್ರಮಗಳು ಮತ್ತು ಅನುಷ್ಠಾನಕ್ಕೆ ಅಗತ್ಯವಾದ ಆಯೋಗ ಸೇರಿದಂತೆ ಇನ್ನಿತರೆ ಆಡಳಿತಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸುರೇಶ್ ಕುಮಾರ್ ಹೇಳಿದರು.

ಉನ್ನತ ಶಿಕ್ಷಣ ಸಚಿವರೂ ಆದ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥ್ ನಾರಾಯಣ್, ಶಿಕ್ಷಣ ಕ್ಷೇತ್ರದಲ್ಲಿ ಕರ್ನಾಟಕವು ನೂತನ ಶಿಕ್ಷಣ ನೀತಿ ಅನುಷ್ಠಾನದ ಮೂಲಕ ಬೇರೆ ರಾಜ್ಯಗಳಿಗೆ ಮಾದರಿಯಾಗಲಿದೆ. ಸುದೀರ್ಘ 34 ವರ್ಷಗಳ ನಂತರದ ಮತ್ತು ಈ ಶತಮಾನದ ಮೊದಲ ಶಿಕ್ಷಣ ನೀತಿಯಾಗಿ ರೂಪಿತವಾಗಿರುವ ನೂತನ ಶಿಕ್ಷಣ ನೀತಿಯನ್ನು ಒಂದು ಆಂದೋಲನದ ಮಾದರಿಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರ ಮುಂದಾಗಿದೆ ಎಂದರು.

ಸರ್ಕಾರವು ನೀತಿ ಅನುಷ್ಠಾನಕ್ಕೆ ಅವಶ್ಯವಿರುವ ಆರ್ಥಿಕ ಸಂಪನ್ಮೂಲವನ್ನು ಒದಗಿಸಬೇಕೆಂದು ಅವರು ಮುಖ್ಯಮಂತ್ರಿಯವರಲ್ಲಿ ನಿವೇದಿಸಿಕೊಂಡರು.

ಕಾರ್ಯಪಡೆ ಸದಸ್ಯರಾದ ತಿಮ್ಮೇಗೌಡ ಶಿಕ್ಷಣ ನೀತಿ ರೂಪುರೇಷೆಗಳನ್ನು ಪ್ರಾತ್ಯಕ್ಷಿತೆ ಮೂಲಕ ಸಾದರಪಡಿಸಿದರು. ಕಾರ್ಯಪಡೆ ಅಧ್ಯಕ್ಷ ಹಾಗೂ ನಿವೃತ್ತ ಮುಖ್ಯ ಕಾರ್ಯದರ್ಶಿ ಎಸ್.ವಿ. ರಂಗನಾಥ್, ಸದಸ್ಯರಾದ ಶಿಕ್ಷಣ ತಜ್ಞ ಡಾ. ಎಂ.ಕೆ. ಶ್ರೀಧರ್, ವಿಧಾನಪರಿಷತ್ ಸದಸ್ಯ ಅರುಣ್ ಶಹಾಪುರ, ಡಾ. ಅನುರಾಗ್ ಬೆಹರ್ ಸೇರಿದಂತೆ ಇತರೆ ಸದಸ್ಯರು ಮತ್ತು ಉನ್ನತ ಶಿಕ್ಷಣ ಮತ್ತು ಪ್ರಾಥಮಿಕ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಜರಿದ್ದರು.

**(ಛಾಯಾಚಿತ್ರ ಲಗತ್ತಿಸಿದೆ)**

## ಅಧಿಕಾರ ಸ್ವೀಕಾರ

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ):

ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಬಿ.ಎಸ್. ಪರಮೇಶ್ವರಯ್ಯ ಅವರು ಇಂದು ದಿನಾಂಕ: 30-11-2020ರಂದು ಕಾರ್ಯಭಾರ ವಹಿಸಿಕೊಂಡಿರುತ್ತಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಛಾಯಾಚಿತ್ರ ಲಗತ್ತಿಸಿದೆ)

## ನವೆಂಬರ್ 30 ರಿಂದ ಡಿಸೆಂಬರ್ 11 ರವರೆಗೆ ಸಕಾಲ ಸಪ್ತಾಹ

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ):

ನವೆಂಬರ್ 30 ರಿಂದ ಡಿಸೆಂಬರ್ 5 ರವರೆಗೆ ನಗರಾಭಿವೃದ್ಧಿ, ಕಂದಾಯ, ಸಾರಿಗೆ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರ ಇಲಾಖೆಗಳಲ್ಲಿ ಹಾಗೂ ಡಿಸೆಂಬರ್ 7 ರಿಂದ 11 ರವರೆಗೆ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಸಕಾಲ ಸಪ್ತಾಹವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಮತ್ತು ಸಕಾಲ ಸಚಿವರಾದ ಎಸ್. ಸುರೇಶ್ ಕುಮಾರ್ ತಿಳಿಸಿದರು.

ಅವರು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ (ಇ ಆಡಳಿತ) ಯಿಂದ ಹಮ್ಮಿಕೊಳ್ಳಲಾದ ಸಕಾಲ ಸಪ್ತಾಹವನ್ನು ಉದ್ಘಾಟಿಸಿ ಮಾತನಾಡಿದರು.

ಹೊಸದಾಗಿ ಸ್ವೀಕರಿಸಿರುವ ಅರ್ಜಿಗಳನ್ನು ಸಕಾಲದಡಿ ಸ್ವೀಕರಿಸಿ ನಿಗದಿತ ಕಾಲಮಿತಿಯಲ್ಲಿ ವಿಲೇ ಮಾಡುವುದು, ಈ ಬಗ್ಗೆ ಜಾಗೃತಿ ಕಾರ್ಯಕ್ರಮಗಳ ಮೂಲಕ ಜನರಿಗೆ ಮಾಹಿತಿ ನೀಡುವುದು, ಸಕಾಲ ತಂಡದಿಂದ ಕಚೇರಿಗಳ ಭೇಟಿ ಹಾಗೂ ತಪಾಸಣೆ, ಹೆಲ್ಪ್ ಡೆಸ್ಕ್ ಸಹಾಯದೊಂದಿಗೆ ಪ್ರಶ್ನಾವಳಿಯನ್ನು ಸಾರ್ವಜನಿಕರಿಂದ ಭರ್ತಿ ಮಾಡಿಸುವುದು ಈ ಸಪ್ತಾಹದ ಪ್ರಮುಖ ಅಂಶಗಳು ಎಂದವರು ತಿಳಿಸಿದರು.

ಸಕಾಲ ಯೋಜನೆಯನ್ನು 02-04-2012ರಂದು 11 ಇಲಾಖೆಗಳ 151 ಸೇವೆಗಳೊಂದಿಗೆ ರಾಜ್ಯಾದಂತ ಪ್ರಾರಂಭಿಸಲಾಯಿತು. ಪ್ರಸ್ತುತ 98 ಇಲಾಖೆಗಳ 1025 ಸೇವೆಗಳನ್ನು ಈ ವ್ಯಾಪ್ತಿಗೆ ತರಲಾಗಿದೆ. ಸಕಾಲದಡಿ ಇದುವರೆವಿಗೂ 22,88,81,652 ಅರ್ಜಿಗಳನ್ನು ಸ್ವೀಕರಿಸಿ, 22,82,55,866 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ.

ಅಕ್ಟೋಬರ್ 2020ರಲ್ಲಿ ನಡೆಸಲಾದ ಮಾಸಿಕ ವಿಶ್ಲೇಷಣೆಯಲ್ಲಿ ನಿಗದಿತ ಸಮಯದಲ್ಲಿ ವಿಲೇವಾರಿ ಹಾಗೂ ಅರ್ಜಿಗಳ ಸ್ವೀಕೃತಿಯ ಹೆಚ್ಚಳ ಹಾಗೂ ಉತ್ತಮ ಪ್ರದರ್ಶಿನ ನೀಡಿದ 3 ಜಿಲ್ಲೆಗಳಾದ ಮಂಡ್ಯ ಚಿಕ್ಕಮಗಳೂರು ಹಾಗೂ ಚಿಕ್ಕಬಳ್ಳಾಪುರಗಳಿಗೆ ಕ್ರಮವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ನೀಡಲಾಗಿದೆ.

ಸಚಿವರು ಇದೇ ಸಮಯದಲ್ಲಿ ರಾಜ್ಯದಲ್ಲಿ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ವಿಡಿಯೋ ಕಾನ್ಫರೆನ್ಸ್ ಮೂಲಕ ಉತ್ತಮ ಸಾಧನೆಯ ಜಿಲ್ಲೆಗಳಿಗೆ ಶುಭಾಶಯ ಕೋರಿ, ಉಳಿದ ಜಿಲ್ಲೆಗಳಿಗೆ ಉತ್ತಮ ಕಾರ್ಯನಿರ್ವಹಿಸುವಂತೆ ಸಹ ಸೂಚಿಸಿದರು.

ಕಡೆಯ ಸ್ಥಾನದಲ್ಲಿ ಬೆಂಗಳೂರು ನಗರ ಜಿಲ್ಲೆ ಇದ್ದು, ಮುಂಬರುವ ದಿನಗಳಲ್ಲಿ ಇದು ಸುಧಾರಣೆ ಕಂಡು ಕೊಳ್ಳಬೇಕೆಂದರು.

ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು ತಮ್ಮ ಹಂತದಲ್ಲಿ ತಪಾಸಣೆ ತಂಡವನ್ನು ರಚಿಸಿ ನೋಡೆಲ್ ಅಧಿಕಾರಿ ನೇವಿಸಬೇಕು. ಹಾಗೆಯೇ ಬೆಂಗಳೂರಿನಲ್ಲಿ ಸಹ ವಿವಿಧ ಇಲಾಖೆಗಳಲ್ಲಿ ಸಕಾಲಕ್ಕಾಗಿ ನೋಡೆಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಪ್ರತಿ ಕಚೇರಿಯಲ್ಲಿ ಸಕಾಲದ ಕುರಿತು ಫಲಕಗಳನ್ನು ಅಳವಡಿಸಬೇಕೆಂದರು.

ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಟಿ.ಎಂ.ವಿಜಯಭಾಸ್ಕರ್ ಅವರು ಸಕಾಲ ಅರ್ಜಿಗಳ ವಿಲೇವಾರಿ ಮಾಡುವಲ್ಲಿ ಯಾವ ಇಲಾಖೆಗಳೂ ಸಹ ವಿಳಂಬ ಧೋರಣೆ ತೋರಬಾರದು. ಅರ್ಜಿಗಳನ್ನು ಸಕಾಲದಡಿ ದಾಖಲಿಸದಿರುವುದು, ವಿಳಂಬ ಮಾಡುವುದು ಇತ್ಯಾದಿಗಳನ್ನು ಮಾಡಬಾರದು. ಸಕಾಲದಡಿ 1813 ಮೇಲ್ಮನವಿ ಅರ್ಜಿಗಳು ಬಾಕಿ ಉಳಿದಿದ್ದು, ಕಾಯ್ದೆಯಡಿ ದಂಡ ವಿಧಿಸಲು ಸಹ ಅವಕಾಶವಿರುತ್ತದೆ. ಸಕಾಲದಲ್ಲಿ ಉತ್ತಮ ಪ್ರದರ್ಶನ ನೀಡಿದ ಜಿಲ್ಲೆಗಳಗೆ ಶ್ರೇಯಾಂಕ ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಕಾಲ ಮಿಷನ್‍ನ ಅಪರ ನಿರ್ದೇಶಕರಾದ ಡಾ.ಬಿ.ಆರ್.ಮಮತ ಪ್ರಾಸ್ತಾವಿಕ ಭಾಷಣ ಮಾಡಿದರು. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಇ ಆಡಳಿತದ) ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೀವ್ ಚಾವ್ಲಾ, ಸಕಾಲ ಮಿಷನ್‍ನ ಯೋಜನಾ ನಿರ್ದೇಶಕರಾದ ವರಪ್ರಸಾದ್ ರೆಡ್ಡಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಮಹೇಂದ್ರ ಜೈನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಕಾರ್ಮಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮಹೇಶ್ವರರಾವ್ ಹಾಗೂ ಇತರ ಹಿರಿಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಮಾಧ್ಯಮದವರು ಉಪಸ್ಥಿತರಿದ್ದರು.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ):

ವಸತಿ ಸಚಿವ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ವಿ.ಸೋಮಣ್ಣ ಅವರು 1ನೇ ಡಿಸೆಂಬರ್ 2020 ರಿಂದ 3ನೇ ಡಿಸೆಂಬರ್ 2020 ರವರೆಗೆ ಕಲಬುರಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು 3ನೇ ಡಿಸೆಂಬರ್ ರಾತ್ರಿ ಕೇಂದ್ರ ಸ್ಥಾನಕ್ಕೆ ಹಿಂದಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ): ನಗರಾಭಿವೃದ್ಧಿ ಸಚಿವ ಬಿ.ಎ. ಬಸವರಾಜ ಅವರು ಡಿಸೆಂಬರ್ 3 ರಂದು ತುಮಕೂರು ಜಿಲ್ಲೆ ಹಾಗೂ 4 ರಂದು ದಾವಣಗೆರೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ಮರಳುವರು.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ): ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ. ಗೋಪಾಲಯ್ಯ ಅವರು ಡಿಸೆಂಬರ್ 05 ರಂದು ಹಾಸನ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರ ಸ್ಥಾನಕ್ಕೆ ವಾಪಸ್ಸಾಗುವರು.

# ರೇರಾ ಪ್ರಾಧಿಕಾರಕ್ಕೆ  ತ್ರೈಮಾಸಿಕ ವರದಿ ಸಲ್ಲಿಸಲು ಡಿಸೆಂಬರ್ ೩೦ರವರೆಗೆ ಗಡವು

ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ):

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ) ದಲ್ಲಿ ನೊಂದಾಯಿಸಿಕೊಮಡಿರುವ ಯೋಜನೆಗಳ 1437 ಅಭಿವೃದ್ಧಿದಾರರು ಈವರೆಗೆ ಒಂದನೆಯ ತ್ರೈಮಾಸಿಕ ಯೋಜನೆ ಪ್ರಗತಿ ವಿವರವನ್ನು ರೇರಾ ವೆಬ್ ಪೋರ್ಟಲ್‌ಗೆ ನಮೂದು ಮಾಡಿಕೊಂಡಿರುವುದಿಲ್ಲ.  ಇದರಿಂದ ರೇರಾ ಪ್ರಾಧಿಕಾರದಲ್ಲಿ ಯೋಜನೆಗಳ ಪ್ರಗತಿ ವಿವರ ಮತ್ತು ಲೆಕ್ಕಪತ್ರಗಳ ಪರಿಶೀಲನೆಗೆ ಸಾಧ್ಯವಾಗಿರುವುದಿಲ್ಲ.

ರೇರಾ ಪ್ರಾಧಿಕಾರವು ಈಗಾಗಲೇ ಅಭಿವೃಧ್ಧದಾರರುಗಳು ತಮ್ಮ ಯೋಜನೆಗಳ ತ್ರೈಮಾಸಿಕ ಪ್ರಗತಿ ವಿವರಗಳನ್ನು ಕಲಂ II(1)(e)  15(D) ರಡಿಯಲ್ಲಿ ವೆಬ್‌ಪೋರ್ಟಲ್ ಮೂಲಕ ಯೋಜನೆಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸುವಂತೆ ಆಗಸ್ಟ್ 01, ಆಗಸ್ಟ್ 29, 2020 ರಂದು ಹಾಗೂ ಅಂತಿಮವಾಗಿ ಸೆಪ್ಟೆಂಬರ್ 17, 2020 ರಲ್ಲಿ ನೋಟೀಸ್ ಜಾರಿ ಮಾಡಲಾಗಿರುತ್ತದೆ.

ಗ್ರಾಹಕರ ಹಿತದೃಷ್ಟಿಯಿಂದ ರೇರಾ ಕಾಯ್ದೆ ಮತ್ತು ನಯಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ರೇರಾ ಕಾಯ್ದೆ 4(2)(1) (ಅ)  ರಂತೆ ಯೋಜನೆಯ ಪ್ರಗತಿ ವಿವರ ಮತ್ತು ಲೆಕ್ಕಪತ್ರಗಳ ಪರಿಶೀಲನೆಗೆ ಅಭಿವೃದ್ಧಿದಾರರು ತಮ್ಮಗಳ ತ್ರೈಮಾಸಿಕ ಪ್ರಗತಿ ವರದಿಯನ್ನು ಸಲ್ಲಿಸಬೇಕಾಗಿರುತ್ತದೆ.  ಆದರೆ ತಮ್ಮ ತ್ರೈಮಾಸಿಕ ಪ್ರಗತಿ ವರದಿಯನ್ನು ಸಲ್ಲಿಸದೇ ಇರುವ ಅಭಿವೃದ್ಧಿದಾರರಿಗೆ ಕಾಯ್ದೆ 7(1)ರಡಿ ಅಭಿವೃದ್ಧಿದಾರರುಗಳ ನೊಂದಣಿ ಸಂಖ್ಯೆಯನ್ನು ರದ್ದುಮಾಡುವ ಮತ್ತು ಕಲಂ 63ರಡಿ ಯೋಜನಾ ವೆಚ್ಚದ ಶೇ.5 ರಷ್ಟು ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಪ್ರಾಧಿಕಾರಕ್ಕೆ ನೋಂದಾಯಿಸಿಕೊಂಡು ತ್ರೈಮಾಸಿಕ ಪ್ರಗತಿ ವಿವರ ಸಲ್ಲಿಸದ 1437 ಅಭಿವೃದ್ಧಿದಾರರ ಪಟ್ಟಿಯನ್ನು ಪ್ರಾಧಿಕಾರದ ವೆಬ್‌ಪೋರ್ಟಲ್ rera.karnataka.gov.in ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಇವರುಗಳು ಯೋಜನೆಯ ತ್ರೈಮಾಸಿಕ ಪ್ರಗತಿ ವರದಿಯನ್ನು ಡಿಸೆಂಬರ್ 30 ರೊಳಗಾಗಿ ಈ ಪ್ರಾಧಿಕಾರದ ವೆಬ್‌ಪೋರ್ಟ್‌ಲ್‌ಗೆ ಸಲ್ಲಿಸಲು ಅಂತಿಮವಾಗಿ ತಿಳಿಸಲಾಗಿದೆ.  ತಪ್ಪಿದ್ದಲ್ಲಿ ರೇರಾ ಕಾಯ್ದೆಯನ್ವಯ ಕ್ರಮ ಜರುಗಿಸುವುದಾಗಿ ರೇರಾ ಪ್ರಾಧಿಕಾರದ ಕಾರ್ಯದರ್ಶಿ ಕೆ.ಎಸ್.ಲತಾ ಕುಮಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅನಧಿಕೃತ ಸಂಪರ್ಕವನ್ನು ಅಧಿಕೃತಗೊಳಿಸಲು ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ**

**ಬೆಂಗಳೂರು, ನವೆಂಬರ್ 30 (ಕರ್ನಾಟಕ ವಾರ್ತೆ)**

ಜಲಮಂಡಳಿಯಿಂದ ಇತ್ತೀಚೆಗೆ ಅನಧಿಕೃತ ನೀರು ಮತ್ತು ಒಳಚರಂಡಿ ಸಂಪರ್ಕಗಳ ತಪಾಸಣೆ ನಡೆಸಲಾಗಿ ಹಲವಾರು ಕಟ್ಟಡಗಳಿಗೆ ಅನಧಿಕೃತವಾಗಿ ನೀರು ಮತ್ತು ಒಳಚರಂಡಿ ಸಂಪರ್ಕವನ್ನು ಅದರಲ್ಲೂ ಒಳಚರಂಡಿ ಸಂಪರ್ಕವನ್ನು ತೆಗೆದುಕೊಂಡಿರುವುದು ಗಮನಕ್ಕೆ ಬಂದಿದ್ದು, ಅಂತಹ ಸಂಪರ್ಕಗಳನ್ನು ಕಡಿತಗೊಳಿಸಲಾಗಿರುತ್ತದೆ. ಆದರೆ, ಇದುವರೆಗೂ ಕಡಿತಗೊಳಿಸಲಾದ ಅನಧಿಕೃತ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಹಲವು ಕಟ್ಟಡಗಳ ಮಾಲೀಕರು ಮಂಡಳಿಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿರುವುದಿಲ್ಲ.

ಈ ಸಂಬಂಧ ಅನಧಿಕೃತವಾಗಿ ತೆಗೆದುಕೊಂಡಿರುವ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಕೂಡಲೇ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಿದ್ದಲ್ಲಿ, ದಮಾಷ (Prorata) ಶುಲ್ಕ ಬರುವ ಕಟ್ಟಡಗಳನ್ನು ಹೊರತುಪಡಿಸಿ ಇತರೆ ಕಟ್ಟಡಗಳಿಗೆ ದಂಡ ವಿಧಿಸದೆ ಮಂಡಳಿಯಿಂದ ತತ್‌ಕ್ಷಣವಾಗಿ ಸಂಪರ್ಕವನ್ನು ಮಂಜೂರು ಮಾಡಲಾಗುವುದು. ಈಗಾಗಲೇ ಒಳಚರಂಡಿ ಸಂಪರ್ಕವನ್ನು ಕಡಿತಗೊಳಿಸಿರುವ ಇಂತಹ ಕಟ್ಟಡದ ಮಾಲೀಕರು ಈಗಲೂ ಸಹ ದಿನಾಂಕ:30.11.2020 ರೊಳಗಾಗಿ ಅಧಿಕೃತಗೊಳಿಸಿಕೊಳ್ಳದಿದ್ದಲ್ಲಿ ಮಂಡಳಿಯ ನಿಯಮಾನುಸಾರ ದಂಡ ವಿಧಿಸುವುದಲ್ಲದೆ ಬಿ.ಎಂ.ಟಿ.ಎಫ್.ಗೂ ಸಹ ದೂರನ್ನು ಸಲ್ಲಿಸಲಾಗುವುದೆಂದು ತಿಳಿಸಲಾಗಿತ್ತು.

ಮುಂದುವರೆದಂತೆ ಅನಧಿಕೃತವಾಗಿ ತೆಗೆದುಕೊಂಡಿರುವ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ನೀಡಲಾದ ಕಾಲಾವಕಾಶವನ್ನು ದಿನಾಂಕ:31-12-2020 ರವರೆಗೆ ವಿಸ್ತರಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ

# <u>BWSSB TO REGULARISE WATER CONNECTIONS ONLINE</u>

Bengaluru November 30 (Karnataka Information)

BWSSB has recently inspected and found the unauthorized water and sewer connections in the areas and especially the sewer line, which had been cut off. However, many building owners have not applied through online to regularize the unauthorized connections that have been cut so far.

If the application is submitted through online to regularize the connections, the connection will be immediately sanctioned by the board without leving any penalty excluding for the buildings for which prorata charges applicable, the owners of such buildings, for which the sewer line have already been cut off, will be liable to be fined according to the BWSSB Act. It has been intimated that the complaint will be lodged at BMTF, if not regularized the connections by 30.11.2020.

Further, the time limit for regularizing the unauthorized connections is extended upto 31-12-2020 says official Press Release